# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ 136 ಜೆ.ಜೆ.ಆರ್ ನಗರ ಬೆಂಗಳೂರು

************************************************************************************

ಸಂಖ್ಯೆ: w-136/Committee/Proceding -34/2021-22 dt. 18-04-2022

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡಿರುವ ಮಾನ್ಯ ನೋಡಲ್ ಅಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

### ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಮಾನ್ಯ ಅಧ್ಯಕ್ಷರು ಇತ್ತೀಚಿನ ದಿನಗಳಲ್ಲಿ ಅಕಾಲಿಕ ಮಳೆಯಿಂದ ಹನಿಗೊಳಗಾದ ಮನೆಗಳ ವಿವರ ಹಾಗೂ ಕೈಗೊಂಡ ವಿವರಗಳನ್ನು ಕೋರಿದರು ಹಾಗೂ ಚರಂಡಿಯಲ್ಲಿ ಹೂಳು ತುಂಬಿದ್ದರೆ ತೆಗೆದು ನೀರು ಮನೆಗಳಿಗೆ ಹರಿಯದಂತೆ ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ಕೋರಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಮನೆಗಳಿಗೆ ಹಾನಿಯಾಗಿರುವುದಿಲ್ಲ, ಮಳೆಯಿಂದ 3ನೇ ಅಡ್ಡರಸ್ತೆ ಪಾದರಾಯನಪುರದಲ್ಲಿ ರಸ್ತೆ ಗುಂಡಿಗಳಗಿದ್ದು ಅದನ್ನು ಗ್ಯಾಂಗ್ ಮೇನ್‌ಗಳ ಸಹಾಯದಿಂದ ಮುಚ್ಚಿಸುವುದಾಗಿ ಮತ್ತು ಮೈಸೂರು ರಸ್ತೆಗಳಲ್ಲಿ ಹೂಳು ತುಂಬಿಕೊಂಡಿದ್ದು ಸದರಿ ಮೋರಿಯಲ್ಲಿ ಹೂಳು ತೆಗೆಸುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ –136ರ ವ್ಯಾಪ್ತಿಯಲ್ಲಿ ಬರುವ ವಿನಾಯಕ ನಗರ ಬಸ್ ನಿಲ್ದಾಣದಲ್ಲಿ ಅನಧಿಕೃತ ವಾಹನ ನಿಲುಗಡೆ ಮಾಡಿ ಬಸ್ ನಿಲ್ದಾಣಕ್ಕೆ ಬಿ. ಎಂ. ಟಿ. ಸಿ ಬಸ್‌ಗಳು ನಿಲ್ದಾಣಕ್ಕೆ ಬರದೆ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿರುವ ಬಗ್ಗೆ ಸಭೆಯಲ್ಲಿ ವಿವರವನ್ನು ಕೋರಿದರು.

Scanned with CamScanner

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಸದರಿ ವಿಷಯದ ಬಗ್ಗೆ ಬಸ್ ನಿಲ್ದಾಣಗಳಲ್ಲಿ ನಿಂತಿರುವ ವಾಹನಗಳನ್ನು ಪೋಲೀಸರನ್ನು ಉಪಯೋಗಿಸಿಕೊಂಡು ತೆರವುಗೊಳಿಸಿದ್ದು, ಬಸ್ ನಿಲ್ದಾಣಕ್ಕೆ ಕಬ್ಬಿಣದ ರಾಡುಗಳನ್ನು ಅಳವಡಿಸಿದ್ದು ಮುಂದಿನ ದಿನಗಳಲ್ಲಿ ಬಸ್ ಗಳು ಬರುವಂತೆ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲ್ಯೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ 12 ವರ್ಷ ದಿಂದ 17 ವರ್ಷ ಲಸಿಕೆ ಅಭಿಯಾನದ ಬಗ್ಗೆ ಹಾಗೂ ಬೂಸ್ಟರ್ ಡೋಸ್ ನೀಡುತ್ತಿರುವ ಬಗ್ಗೆ ಸಭೆಯಲ್ಲಿ ಕೋರಿದರು.

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಹೋಗಿ ಪ್ರತಿಯೊಬ್ಬರ ಆರೋಗ್ಯ ವಿಚಾರಿಸಿ 12 ವರ್ಷ ದಿಂದ 17 ವರ್ಷದವರಿಗೆ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ತೆಗೆದು ಕೊಳ್ಳಲು ಮನಹೊಲಿಸಿ ಲಸಿಕೆ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಬೂಸ್ಟರ್ ಡೋಸ್ ಪಡೆಯುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -136ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ವಾಹನಗಳ ಹಾಜರಾತಿ ಸಭೆಯಲ್ಲಿ ನೀಡಿದರು,

Scanned with CamScanner

ಮಾನ್ಯ ಅಧ್ಯಕ್ಷರು ಅಪ್ತ ಮಿತ್ರ ಸ್ವಯಂ ಸೇವಕರಿಗೆ ಬಿ.ಬಿ.ಎಂ.ಪಿ. ವತಿಯಿಂದ ಉಚಿತ ತರಬೇತಿ ನೀಡಲು ಉದ್ದೇಶಿಸಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಉತ್ಸಹಿ ಯುವಕರನ್ನು ಗುರ್ತಿಸಲು ತಿಳಿಸಿದರು.

ಸಮಿತಿಯ ಸದಸ್ಯರು ಅಸಕ್ತಿ ಹೊಂದಿರುವ ಯುವಕ/ಯುವತಿಯನ್ನು ಗುರ್ತಿಸಿ ನೀಡುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್–136ರ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಕೆಟ್ಟುಹೊಗಿದ್ದು ಸದರಿ ಬೀದಿ ದೀಪಗಳನ್ನು ಸರಿಪಡಿಸುವಂತೆ ಬೀದಿ ದೀಪಾಗಳ ನಿರ್ವಾಹಣೆ ಮಾಡುತ್ತೀರುವ ಗುತ್ತಿಗೆದಾರರಿಗೆ ಹಾಗೂ ಬಿ.ಬಿ.ಎಂ.ಪಿ ಬೀದಿ ದೀಪಾಗಳ ವಿಭಾಗಕ್ಕೆ ಪತ್ರವನ್ನು ಬರೆಯಲು ಸಭೆಯಲ್ಲಿ ಸೂಚಿಸಲಾಯಿತು

ಮಾನ್ಯ ಸದಸ್ಯರು ವಾರ್ಡ್–136ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೇಸ್ಕಾಂಗೆ ಸಂಬಂಧಿಸಿದ ದೂರುಗಳು ಬಂದಿದ್ದು ರಾತ್ರಿಯ ಸಮಯದಲ್ಲಿ ಸ್ವಿಚ್‌ಗಳು ಹಾಗೂ ಲೈಟ್‌ಗಳು ಹಾಳಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು ಬಿ.ಬಿ.ಎಂ.ಪಿ ಬೀದಿ ದೀಪಗಳು ರವರಿಗೆ ಪತ್ರವನ್ನು ಬರೆಯುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಂ ಕಛೆರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬೆಸ್ಕಂ ಆಧಿಕಾರಿಯವರು ವಾರ್ಡ್ 136ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಮಾನ್ಯ ಸದಸ್ಯರುಗಳು ವಾರ್ಡ್ ವ್ಯಾಪ್ತಿಯಲ್ಲಿ ಕೊಳವೆ ಭಾವಿಗಳು ದುಸ್ಥತಿಯಲ್ಲಿದ್ದು ಇದ್ದು ಸರಿಪಡಿಸುವಂತೆ ಸಭೆಯಲ್ಲಿ ಕೋರಿದರು.

ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಈ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

Scanned with CamScanner

ಕಮಿಟಿ ಸದಸ್ಯರು ವಾರ್ಡ್ 136ರ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಸ ಹಾಗೂ ಇತರೆ ತ್ಯಾಜ್ಯ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಕಿರಿಯ ಆರೋಗ್ಯ ಪರೀವಿಕ್ಷಕರನ್ನು ವಿಷಯದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ವಿಷಯವು ಬಂದಿದ್ದು ಸದರಿ ಸ್ಥಳಗಳಲ್ಲಿ ತ್ಯಾಜ್ಯ ಎಸೆಯುವವರ ಬಗ್ಗೆ ನಿಗವಹಿಸುವಂತೆ ಮಾರ್ಷಲ್‌ಗಳಿಗೆ ತಿಳಿಸಿ ಬಿ.ಬಿ.ಎಂ.ಪಿ ನಿಯಮನುಸಾರ ಕ್ರಮ ಕೈಗೊಳ್ಳು ಸಭೆಯಲ್ಲಿ ಹಾಜರಾಗಿದ್ದ ಮಾರ್ಷಲ್‌ಗಳಿಗೆ ಸೂಚಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು ಹಾಗೂ 2021-22ನೇ ಸಾಲಿನ ಕಾರ್ಯಕ್ರಮ ಪಟ್ಟಿಗಳಿಗೆ ಅಂದಾಜು ಪಟ್ಟಿ ತಯಾರಿಸಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ಕೋರಿ ಕಡತವನ್ನು ಸಲ್ಲಿಸಿರುವುದಾಗಿ ಸಭೆಯಲ್ಲಿ ವಿವರಣೆ ನೀಡಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 136ರ ವ್ಯಾಪ್ತಿಯಲ್ಲಿ ಮಾಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-136ರ ಮಾಷಲ್ ಗಳು ಒಟ್ಟು ವಿಧಿಸಿದ ದಂಡ ಎಸ್ ಡಬ್ಲೂಎಂ. ದಂಡ ರೂ. 5000 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.



Scanned with CamScanner

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ: | | ಸಹಿ |
|---|---|---|---|
| 1 | ಡಾ|| ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೂಡಲ್ ಅಧಿಕಾರಿ | [signature] 18/4/22 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | [signature] |
| 3 | ಎಸ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ –136 | ಸದಸ್ಯರು | [signature] 19/4/22 |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ. ಹಿರಿಯ ಆರೋಗ್ಯಧಿಕಾರಿಗಳು ಜಿ.ಎಂ. ಮುತ್ಯಾಲು ದೂ. 9916444041 | ಸದಸ್ಯರು | [signature] |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | [signature] |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | [signature] |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | [signature] |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎಸ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | [signature] 19/4/22 |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಕುಮಾರ ಸ್ವಾಮಿ, ದೂ. 9060341644 | ಸದಸ್ಯರು | [signature] |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | [signature] |
| 12 | ಮಾಗಡಿ ರಸ್ತೆ ಸಂಚಾರ ಪೊಲೀಸ್ ಠಾಣೆ ಯ ಪ್ರತಿನಿಧಿ<br>ಶ್ರೀ ರಾಮಚಂದ್ರ ಎ. ಎ.ಎಸ್.ಐ ದೂ.9902992624 | ಸದಸ್ಯರು | [signature] HC8109 |
| 13 | ಜೆ.ಜೆ.ಆರ್ ನಗರ ಪೊಲೀಸ್ ಠಾಣೆ ಯ ಪ್ರತಿನಿಧಿ | ಸದಸ್ಯರು | [signature] HC9493 |
| 14 | ವಾರ್ಡ್ 136 ಮಾರ್ಷಲ್, ಮುಬೀನ್ 8792255420 | ಸದಸ್ಯರು | [signature] |

[signature]
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 136
ವಾರ್ಡ್ ಹಂತದ ಸಮೀತಿ

[signature] 18/4/22
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

Scanned with CamScanner